ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಪ್ರಥಮ ದರ್ಜೆ ಕಾಲೇಜು/ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

553(690) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಥಮ ದರ್ಜೆ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಹಾಗೂ ಇವರಿಗೆ ಮಾಸಿಕ ನೀಡಲಾಗುತ್ತಿರುವ ವೇತನ ಎಷ್ಟು ; (ವರ್ಗವಾರು ವಿವರ ನೀಡುವುದು)

(ಆ) ಸದರಿಯವರಿಗೆ ವೇತನ ಪರಿಷ್ಕರಣೆ ಮಾಡಲು ಸರ್ಕಾರ ಚಿಂತಿಸುವುದೇ ;

(ಇ) ಹಾಗಾದರೆ, ಯಾವ ಪ್ರಮಾಣದಲ್ಲಿ ಯಾವ ಅವಧಿಯಲ್ಲಿ ಪರಿಷ್ಕರಣೆ ಮಾಡಲಾಗುವುದು ;

(ಈ) ಸದರಿಯವರಲ್ಲಿ ಯು.ಜಿ.ಸಿ ವಿದ್ಯಾರ್ಹತೆ ಪಡೆದಿರುವವರನ್ನು ಸಕ್ರಮಗೊಳಿಸಲು ವಿಶೇಷ ನಿಯಮಾವಳಿಯನ್ನು ಸರ್ಕಾರ ರೂಪಿಸುವುದೇ ?